**ಕರ್ನಾಟಕ ಸರ್ಕಾರ**

**ಸಂಖ್ಯೆ:ಸಿಆಸುಇ:112:ಆರ್.ಟಿ.ಐ.:2015**

**ಕರ್ನಾಟಕ ಸರ್ಕಾರದ ಸಚಿವಾಲಯ,**
**ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಜನಸ್ಪಂದನ)**
**3ನೇ ಮಹಡಿ, ಪೋಡಿಯಂ ಬ್ಲಾಕ್,**
**ವಿಶ್ವೇಶ್ವರಯ್ಯ ಮುಖ್ಯ ಗೋಪುರ,**
**ಬೆಂಗಳೂರು, ದಿನಾಂಕ: 05.08.2015.**

# ಸುತ್ತೋಲೆ

ವಿಷಯ: ಕರ್ನಾಟಕ ಮಾಹಿತಿ ಆಯೋಗದಲ್ಲಿ ದಾಖಲಾಗುವ ಪ್ರಕರಣಗಳನ್ನು ವಿಡಿಯೋ ಕಾನ್ಫರೆನ್ಸ್ ಮೂಲಕ ವಿಚಾರಣೆ ಮಾಡುವ ಬಗ್ಗೆ

---o---

ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು ಅರ್ಜಿದಾರರಿಬ್ಬರಿಗೂ ಅನುಕೂಲ ಕಲ್ಪಿಸುವ ದೃಷ್ಟಿಯಿಂದ, ಆಯೋಗವು ಪ್ರಕರಣಗಳ ವಿಚಾರಣೆಯನ್ನು ವಿಡಿಯೋ ಕಾನ್ಫರೆನ್ಸ್ ಮೂಲಕ ಮಾಡುತ್ತದೆ. ಕರ್ನಾಟಕ ಮಾಹಿತಿ ಆಯೋಗದ 2013-14ನೇ ಸಾಲಿನಲ್ಲಿ ಮಾಡಿರುವ ಶಿಫಾರಸ್ಸುಗಳನ್ವಯ:

1. ಪ್ರಕರಣ ಪಟ್ಟಿಯ ಒಂದು ಪ್ರತಿಯನ್ನು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಇವರಿಗೆ ಸಾಕಷ್ಟು ಮುಂಚಿತವಾಗಿ ಕಳುಹಿಸಲಾಗುತ್ತದೆ. ಆದ್ದರಿಂದ ಸಂಬಂಧಪಟ್ಟ ಜಿಲ್ಲಾಧಿಕಾರಿ ಮತ್ತು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಕನಿಷ್ಠಪಕ್ಷ ವಿಚಾರಣೆಯ ದಿನಾಂಕಕ್ಕಿಂತ ಮೊದಲೇ ಮಾಹಿತಿಯನ್ನು ಒದಗಿಸಲಾಗಿದೆಯೇ ಎನ್ನುವುದರ ಬಗ್ಗೆ ಪರಿಶೀಲನೆ ಮಾಡುವುದು ಮತ್ತು ಖಚಿತಪಡಿಸಿಕೊಳ್ಳುವುದು. ಇದರಿಂದ ಪ್ರಕರಣಗಳ ವಿಚಾರಣ ಪ್ರಕ್ರಿಯೆಯು ವಿಳಂಬವಾಗುವುದಿಲ್ಲ. ವಿಡಿಯೋ ಕಾನ್ಫರೆನ್ಸ್ ಮೂಲಕ ನಡೆಯುವ ವಿಚಾರಣೆಯ ಉದ್ದೇಶವು ಯಶಸ್ವಿಯಾಗುತ್ತದೆ.
2. ವಿಡಿಯೋ ಕಾನ್ಫರೆನ್ಸ್ ಮೂಲಕ ನಡೆಯುವ ಎಲ್ಲಾ ವಿಚಾರಣೆಗಳಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ಹಾಗೂ ಉಪಕಾರ್ಯದರ್ಶಿ ದರ್ಜೆಗಿಂತ ಕಡಿಮೆ ಇಲ್ಲದ ಅಧಿಕಾರಿಯೊಬ್ಬರು ಅನುಕ್ರಮವಾಗಿ ಜಿಲ್ಲಾಧಿಕಾರಿ ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿಯ ಪರವಾಗಿ ತಪ್ಪದೇ ಹಾಜರಿರಬೇಕು.
3. ಎಲ್ಲ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಹಾಗೂ ಮೊದಲನೆ ಅಪೀಲು ಪ್ರಾಧಿಕಾರಿಗಳು ವಿಡಿಯೋ ಕಾನ್ಫರೆನ್ಸ್‌ನಲ್ಲಿ ಖುದ್ದಾಗಿ ಹಾಜರಾಗುವುದನ್ನು ಕಡ್ಡಾಯಗೊಳಿಸತಕ್ಕದ್ದು ಹಾಗೂ ಅವರು ಯಾವುದೇ ಕಾರಣಗಳಿಗಾಗಿ ಹಾಗೆ ಭಾಗವಹಿಸಲು ಸಾಧ್ಯವಾಗದಿದ್ದಲ್ಲಿ, ಜಿಲ್ಲಾಧಿಕಾರಿ ಅಥವಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಇವರಿಂದ ಪೂರ್ವಾನುಮತಿಯನ್ನು ಪಡೆಯತಕ್ಕದ್ದು. ಅಲ್ಲದೆ, ವಿಚಾರಣೆ ಸಮಯದಲ್ಲಿ ಜವಾಬ್ದಾರಿಯುತ ಅಧಿಕಾರಿಯನ್ನು ಅವರ ಪ್ರತಿನಿಧಿಯಾಗಿ ನಿಯೋಜಿಸತಕ್ಕದ್ದು. ಅನುಮತಿಯನ್ನು ಖಂಡಿತವಾಗಿಯೂ ಅಗತ್ಯವಿರುವ ಸಂದರ್ಭಗಳಲ್ಲಿ ನೀಡಬಹುದು.
4. ಸಾರ್ವಜನಿಕ ಮಾಹಿತಿ ಅಧಿಕಾರಿಗಳು ವಿಚಾರಣೆಯ ಸಮಯದಲ್ಲಿ ಕಡತದಲ್ಲಿ ಲಭ್ಯವಿರುವ ಮಾಹಿತಿ ಒದಗಿಸಲಾಗಿದೆ ಎನ್ನುವುದನ್ನು ಆಯೋಗಕ್ಕೆ ದೃಢಪಡಿಸುವುದಕ್ಕಾಗಿ ತಾವು ಒದಗಿಸಿದ ಮಾಹಿತಿಯ ಹೆಚ್ಚುವರಿ ಪ್ರತಿ ಹಾಗೂ ಕೋರಲಾಗಿದ್ದ ಮಾಹಿತಿಗೆ ಸಂಬಂಧಿಸಿದ ಮೂಲ ಕಡತಗಳೊಂದಿಗೆ ಹಾಜರಿರತಕ್ಕದ್ದು.

ಮೇಲೆ ತಿಳಿಸಿದಂತೆ ವಿಡಿಯೋ ಕಾನ್ಫರೆನ್ಸ್ ಮೂಲಕ ವಿಚಾರಣೆಗಳನ್ನು ಮಾಡುವುದಕ್ಕೆ ಸಂಬಂಧಿಸಿದಂತೆ ಮೇಲಿನ ಸೂಚನೆಗಳನ್ನು ಕಡ್ಡಾಯವಾಗಿ ಅನುಪಾಲಿಸುವಂತೆ ತಮ್ಮ ಆಡಳಿತದ ಅಧೀನದಲ್ಲಿ ಬರುವ ಎಲ್ಲ ಸಾರ್ವಜನಿಕ ಪ್ರಾಧಿಕಾರಗಳ ಮೊದಲ ಮೇಲ್ಮನವಿ ಪ್ರಾಧಿಕಾರಿಗಳಿಗೆ/ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಹಾಗೂ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡುವುದು.

**(ಪರಮೇಶ್ ಪಾಂಡೆ)**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜನಸ್ಪಂದನ)

**ಇವರಿಗೆ,**

ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು/
ಎಲ್ಲಾ ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು

**ಪ್ರತಿ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಎಲ್ಲ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಮುಖ್ಯ ಮಾಹಿತಿ ಆಯುಕ್ತರ ಆಪ್ತ ಸಹಾಯಕರು, ಕರ್ನಾಟಕ ಮಾಹಿತಿ ಆಯೋಗ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಆಸುಇ(ಜನಸ್ಪಂದನ), ವಿ.ವಿ.ಗೋಪುರ.
5. ಕಾರ್ಯದರ್ಶಿಗಳು, ಕರ್ನಾಟಕ ಮಾಹಿತಿ ಆಯೋಗ, ಬಹುಮಹಡಿಗಳ ಕಟ್ಟಡ, ಬೆಂಗಳೂರು.